(16)

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ ಇವರು ನಿಯಮ-72 ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಕಂದಾಯ ಸಚಿವರ ಹೇಳಿಕೆ:**

ಕೊಡಗು ಜಿಲ್ಲೆ ಮಡಿಕೇರಿ ತಾಲ್ಲೂಕು ಕರ್ಣಗೇರಿ ಗ್ರಾಮದ ಸರ್ವೆ ನಂ382 ಮತ್ತು 383 ರಲ್ಲಿ ಕಟ್ಟುತ್ತಿರುವ ಮಿನಿ ವಿಧಾನಸೌಧದ ಕಾಮಗಾರಿಯ 2ನೇ ಹಂತದ ಕಾಮಗಾರಿಗೆ ಅಂದಾಜು ಪಟ್ಟಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದರು ಸಹ ಇಲ್ಲಿಯವರೆಗೆ ಅನುಮೋದನೆಯಾಗದೆ ಮಡಿಕೇರಿಯ ಮಿನಿ ವಿಧಾನಸೌಧ ಕಟ್ಟಡ ಕಾಮಗಾರಿಯು ನೆನಗುದಿಗೆ ಬಿದ್ದಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯ ಬಯಸುತ್ತೇನೆ.

*********

ಕೊಡಗು ಜಿಲ್ಲೆ ಮಡಿಕೇರಿ ತಾಲ್ಲೂಕಿನಲ್ಲಿ ಹೊಸದಾಗಿ ನಿರ್ಮಾಣವಾಗುತ್ತಿರುವ ತಾಲ್ಲೂಕು ಮಿನಿ ವಿಧಾನಸೌಧ ಕಟ್ಟಡದ ಕಾಮಗಾರಿಯನ್ನು ಒಟ್ಟು 2 ಹಂತಗಳಲ್ಲಿ ನಿರ್ಮಿಸಲು ಕ್ರಮವಹಿಸಲಾಗುತ್ತಿದೆ. ಮೊದಲನೇ ಹಂತದಲ್ಲಿ ರೂ.500.00 ಲಕ್ಷಗಳಲ್ಲಿ ಕಾಮಗಾರಿಯನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಕಾಮಗಾರಿಯು ಪ್ರಗತಿಯಲ್ಲಿದೆ. ಮುಂದುವರೆದು, ಎರಡನೇ ಹಂತದ ಕಾಮಗಾರಿಯನ್ನು ರೂ.500.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ನಿರ್ಮಿಸಲು ಸರ್ಕಾರದ ಆದೇಶ ಸಂಖ್ಯೆ: ಕಂಇ 25 ಡಬ್ಲ್ಯೂಬಿಆರ್ 2021 ದಿನಾಂಕ 08.06.2021 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಕಂಇ 100 ಡಬ್ಲ್ಯೂಬಿಆರ್ 2021

**(ಆರ್. ಅಶೋಕ)**
ಕಂದಾಯ ಸಚಿವರು